# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ

## (ಮುಂದುವರೆದ ಉಪವೇಶನಗಳು)

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ: 29ನೇ ಮಾರ್ಚ್, 2016**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಗಳ ರೀತ್ಯಾ.)

### 03. ವರದಿಗಳನ್ನೊಪ್ಪಿಸುವುದು

**ಅ) ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ), (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯ ನಾಲ್ಕನೇ ವರದಿಯನ್ನು ಒಪ್ಪಿಸುವುದು.

**ಆ) ಶ್ರೀಮತಿ ಮೋಟಮ್ಮ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಆರನೇ ವರದಿಯನ್ನು ಒಪ್ಪಿಸುವುದು.

### 04. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರು:-

ಅ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು, ಸಿದ್ಧಾಪುರದಿಂದ ಶಂಕರನಾರಾಯಣ-ಹಾಲಾಡಿ-ಕಕ್ಕುಂಜೆ-ಬಿಲ್ಲಾಡಿ-ವಂಡೂರು-ಶಿರೂರು-ಮಂದಾರ್ತಿ ಮಾರ್ಗವಾಗಿ ಉಡುಪಿಗೆ ಸರ್ಕಾರಿ ಬಸ್ ಸೌಲಭ್ಯ ಒದಗಿಸುವ ಕುರಿತು ಹಾಗೂ

ಆ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ಕಂದಾಯ, ಪೌರಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಬೇಜವಾಬ್ದಾರಿ, ಅಧಿಕಾರ ದುರುಪಯೋಗದಿಂದ ಹಾಸ್ಟೆಲ್ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಆಗುತ್ತಿರುವ ಕಿರುಕುಳ ಹಾಗೂ ತೊಂದರೆ ಸರಿಪಡಿಸುವ ಬಗ್ಗೆ ಅರ್ಜಿಗಳನ್ನು ಒಪ್ಪಿಸುವುದು.

..2

## 05. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**01. ಕರ್ನಾಟಕ ಲೋಕಸೇವಾ ಆಯೋಗ (ವ್ಯವಹಾರ ನಿರ್ವಹಣೆ ಮತ್ತು ಹೆಚ್ಚುವರಿ ಪ್ರಕಾರ್ಯಗಳು) (ತಿದ್ದುಪಡಿ) ವಿಧೇಯಕ, 2016**

**ಶ್ರೀ ಸಿದ್ದರಾಮಯ್ಯ** (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಲೋಕಸೇವಾ ಆಯೋಗ (ವ್ಯವಹಾರ ನಿರ್ವಹಣೆ ಮತ್ತು ಹೆಚ್ಚುವರಿ ಪ್ರಕಾರ್ಯಗಳು) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**02. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2016**

**ಶ್ರೀ ಎಚ್.ಆಂಜನೇಯ,** (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**03. ಬಾಲ್ಯ ವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ವಿಧೇಯಕ, 2016**

**ಶ್ರೀಮತಿ ಉಮಾಶ್ರೀ** (ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಬಾಲ್ಯ ವಿವಾಹ ನಿಷೇಧ(ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ವಿತ್ತೀಯ ಕಾರ್ಯಕಲಾಪ

2016-2017ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

(ಎರಡನೇ ದಿನ)

## 07. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಪುಟ್ಟಣ** ಅವರು ಅಲೆಯನ್ಸ್ ವಿಶ್ವವಿದ್ಯಾಲಯದ ಛಾನ್ಸಲರ್‌ರವರು ಹೆಣ್ಣು ಮಕ್ಕಳ ಮೇಲೆ ಶೋಷಣೆ ಮತ್ತು ದೌರ್ಜನ್ಯ ಮಾಡಿರುತ್ತಾರೆ ಎಂಬ ಆರೋಪಗಳು ಇರುವುದರಿಂದ ಇವರನ್ನು ಛಾನ್ಸಲರ್ ಹುದ್ದೆಯಿಂದ ಬಿಡುಗಡೆಗೊಳಿಸಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಕೆ.ಸಿ.ಕೊಂಡಯ್ಯ** ಅವರು ಹೈದರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಧರಿಸುವುದಕ್ಕೆ ವಿನಾಯಿತಿ ನೀಡುವ ಕುರಿತು **ಮಾನ್ಯ ಸಾರಿಗೆ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಎಂ.ಕೆ.ಪ್ರಾಣೇಶ್** ಅವರು ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನ ಕಳಸಾ ಹೋಬಳಿ, ನೆಲ್ಲಿಬಿಡು ಮತ್ತು ಕಳಸಾ ಪಟ್ಟಣದ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯು ಅರ್ಧಕ್ಕೆ ಸ್ಥಗಿತಗೊಂಡಿರುವ ಕುರಿತು **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳಯುವುದು.

## 08. ನಿಯಮ 330ರ ಮೇರೆಗೆ

**ಅ) ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** ಅವರು ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಶಿವಯೋಗ ಮಂದಿರದಲ್ಲಿ ಜವಾರಿ ಆಕಳುಗಳ ಗೋಮೂತ್ರದಿಂದ **"ಅರ್ಕ"** ತಯಾರಿಸುವ ಚಿಕ್ಕ ಉದ್ದಿಮೆಯನ್ನು ಸ್ಥಾಪಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಣ್ಣ ಕೈಗಾರಿಕೆ ಸಚಿವರು)**

**ಆ) ಶ್ರೀ ಡಿ.ಎಸ್.ವೀರಯ್ಯ** ಅವರು ರಾಜ್ಯದಲ್ಲಿ 2015ನೇ ಸಾಲಿನ "ಜೀತ ಪದ್ಧತಿ ಪರಿಶೀಲನಾ ಸಮಿತಿ"ಯ ವರದಿಯನ್ನು ಪರಾಮರ್ಶಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

**ವಿ. ಶ್ರೀಶ್**
**ಕಾರ್ಯದರ್ಶಿ**

---